# **ಕರ್ನಾಟಕಸರ್ಕಾರ**

ಸಂಖ್ಯೆ: ಸಿಆಸುಇ 29 ಸೇವನೆ 2020

ಕರ್ನಾಟಕ ಸರ್ಕಾರದ ಸಚಿವಾಲಯ, ವಿಧಾನಸೌಧ,
ಬೆಂಗಳೂರು, ದಿನಾಂಕ: 17.04.2021.

## **ಅಧಿಸೂಚನೆ**

ಕರ್ನಾಟಕಸಿವಿಲ್ ಸೇವಾ (ಕಂಪ್ಯೂಟರ್ ಸಾಕ್ಷರತಾಪರೀಕ್ಷೆ) ನಿಯಮಗಳು, 2012, ಇದನ್ನು ಮತ್ತಷ್ಟು ತಿದ್ದುಪಡಿ ಮಾಡುವುದಕ್ಕೆ ದಿನಾಂಕ: 15.03.2021ರ ಅಧಿಸೂಚನೆ ಸಂಖ್ಯೆ: ಸಿಆಸುಇ 29 ಸೇವನೆ 2020ರಲ್ಲಿ ಪ್ರಕಟಿಸಿರುವ ಈ ಮುಂದಿನ ನಿಯಮಗಳ ಕರಡನ್ನು ಅಧಿಕೃತ್ ರಾಜ್ಯಪತ್ರದಲ್ಲಿ ಪ್ರಕಟಿಸಿದ ದಿನಾಂಕದಿಂದ 15 ದಿನಗಳೊಳಗಾಗಿ ಅದರಿಂದ ಬಾಧಿತ್ರಾಗುವ ಸಂಭವವಿರುವ ಎಲ್ಲಾ ವ್ಯಕ್ತಿಗಳಿಂದ ಆಕ್ಷೇಪಣೆಗಳನ್ನು ಮತ್ತು ಸಲಹೆಗಳನ್ನು ಆಹ್ವಾನಿಸಿ ದಿನಾಂಕ: 15.03.2021ರ ಕರ್ನಾಟಕ ರಾಜ್ಯಪತ್ರದ ಭಾಗ VI-A ರಲ್ಲಿ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ ಅಧಿನಿಯಮ, 1978 (1990ರ ಕರ್ನಾಟಕ ಅಧಿನಿಯಮ 14)ರ 3ನೇ ಪ್ರಕರಣದ (2) ನೇ ಉಪಪ್ರಕರಣದ (ಎ) ಖಂಡವನ್ನು ಪ್ರಕರಣ 8ರೊಂದಿಗೆ ಓದಿಕೊಂಡು ಅದರಲ್ಲಿ ಅಗತ್ಯಪಡಿಸಲಾದಂತೆ ಪ್ರಕಟಿಸಲಾಗಿರುವುದರಿಂದ;

ಸದರ ರಾಜ್ಯಪತ್ರವನ್ನು ದಿನಾಂಕ: 15.03.2021 ರಂದ್ದು ಸಾರ್ವಜನಿಕರಿಗೆ ಲಭ್ಯವಾಗುವಂತೆ ಮಾಡಿರುವುದರಿಂದ;

ಮತ್ತು ಸದರ ಕರಡಿನ ಬಗ್ಗೆ ಯಾವುದೇ ಆಕ್ಷೇಪಣೆ/ಸಲಹೆಯು ರಾಜ್ಯಸರ್ಕಾರದಲ್ಲಿ ಸ್ವೀಕೃತ್ವಾಗಿಲ್ಲದಿರುವುದರಿಂದ;

ಈಗ, ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ ಅಧಿನಿಯಮ, 1978(1990ರ ಕರ್ನಾಟಕ ಅಧಿನಿಯಮ 14)ರ 3ನೇ ಪ್ರಕರಣದ (1)ನೇ ಉಪಪ್ರಕರಣವನ್ನು 8ನೇ ಪ್ರಕರಣದೊಂದಿಗೆ ಓದಿಕೊಂಡಂತೆ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು ಈ ಕ್ಷಳಕಂಡ ನಿಯಮಗಳನ್ನು ರಚಿಸುತ್ತದೆ, ವೆಂದರೆ:-

## **ನಿಯಮಗಳು**

**1.ಶೀರ್ಷಿಕೆ ಮತ್ತು ಪ್ರಾರಂಭ:-** (1) ಈ ನಿಯಮಗಳನ್ನು ಕರ್ನಾಟಕ ಸಿವಿಲ್ ಸೇವಾ (ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆ) (ತಿದ್ದುಪಡಿ) ನಿಯಮಗಳು, 2021 ವೆಂದ್ದು ಕರೆಯತಕ್ಕದ್ದು.

(2) ಈ ನಿಯಮಗಳು ಅಂತಿಮವಾಗಿ ಅಧಿಕೃತ್ ರಾಜ್ಯಪತ್ರದಲ್ಲಿ ಪ್ರಕಟಿಸಿ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

**2.ನಿಯಮ 3ಕ್ಕೆ ತಿದ್ದುಪಡಿ:-** ಕರ್ನಾಟಕ ಸಿವಿಲ್ ಸೇವಾ (ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆ) ನಿಯಮಗಳು, 2012ರಲ್ಲಿ ನಿಯಮ 3ರ ಉಪನಿಯಮ 3ನ್ನು ಕೈ ಬಿಡಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ತೇಜಾವತಿ.ಎನ್.)
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬಬಂದಿ ಮತ್ತು ಆಡಳಿತ್
ಸುಧಾರಣೆ ಇಲಾಖೆ
(ಸೇವಾ ನಿಯಮಗಳು-ವಿಶೇಷ ಕೋಶ)